16.	Asst. Commercial Taxes Ranebennur	45.21	40.49
	Total	**607.04**	**486.01**

ಹುಬ್ಬಳ್ಳಿ -ಧಾರವಾಡ ಅವಳಿನಗರದಲ್ಲಿ ಉಚ್ಚನ್ಯಾಯಾಲಯ ಪ್ರಾರಂಭ

888(1651) ಶ್ರೀ ಮಂಜುನಾಥ.ಸಿ. ಕುನ್ನೂರ(ಶಿಗ್ಗಾಂವ) :- ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ-ಧಾರವಾಡ ಅವಳಿ ನಗರಳಲ್ಲಿ ಉಚ್ಚನ್ಯಾಯಾಲಯದ ಪೀಠವನ್ನು ಪ್ರಾರಂಭ ಮಾಡುವುದು ಸರ್ಕಾರದ ಮುಂದೆ ಸಲಹೆ ಇದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು;

ಇ) ಉತ್ತರ ಕರ್ನಾಟಕದ ಜನತೆಯ ಬಹುದಿನದ ಬೇಡಿಕೆ ಈ ಉಚ್ಚನ್ಯಾಯಾಲಯದ ಪೀಠವನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಶ್ರೀ ವೀರಪ್ಪಮೊಯಿಲಿ(ಮುಖ್ಯಮಂತ್ರಿಗಳು) :-

ಅ) ಹೌದು

ಆ) ಕೇಂದ್ರ ಸರ್ಕಾರವು ಸಲಹೆ ಮಾಡಿರುವಂತೆ ಸದರಿ ಪ್ರಸ್ತಾವನೆಗೆ ಉಚ್ಚನ್ಯಾಯಾಲಯದ ಸಹಮತಿಯನ್ನು ಕೋರಲಾಗಿ, ಉಚ್ಚ ನ್ಯಾಯಾಲಯವು ಸದರಿ ವಿಷಯವನ್ನು ಪೂರ್ಣ ಪೀಠದ ಮುಂದಿರಿಸಿ ನಿರ್ಣಯವನ್ನು ಸರ್ಕಾರಕ್ಕೆ ತಿಳಿಸುವುದಾಗಿ ತಿಳಿಸಿರುತ್ತಾರೆ. ಪೂರ್ಣ ಪೀಠದ ನಿರ್ಣಯವನ್ನು ಎದುರುನೋಡಲಾಗುತ್ತಿದೆ.

ಇ) ಪ್ರಸ್ತಾವನೆಯು ಉಚ್ಚನ್ಯಾಯಾಲಯದ ಪರಿಶೀಲನೆಯಲ್ಲಿರುವುದರಿಂದ ಇಂತಿಷ್ಟೇ ಸಮಯದಲ್ಲಿ ಪೀಠವನ್ನು ಸ್ಥಾಪಿಸಲಾಗುವುದು ಎಂದು ಹೇಳಲು ಸಾಧ್ಯವಿಲ್ಲ.

ಮಂಡ್ಯ ಜಿಲ್ಲೆಯ ಬಸರಾಳು ಗ್ರಾಮದಲ್ಲಿರುವ ಪ್ರಾಚೀನ ದೇವಸ್ಥಾನವನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡುವುದು.

889(1649) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) :- ಮಾನ್ಯ ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯ ಜಿಲ್ಲೆಯ ಬಸರಾಳು ಗ್ರಾಮದಲ್ಲಿ ಹೋಯ್ಸಳ ಲಾಂಛನವಿರುವ ಪ್ರಾಚೀನ